# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ತುರ್ತು ಕಾಮಗಾರಿಗಳ ಅನುಷ್ಠಾನಕ್ಕಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಜಿಲ್ಲಾ ಪಂಚಾಯತಿಗಳು, CE/PRED ಹಾಗೂ ಚುನಾಯಿತ ಪ್ರತಿನಿಧಿಗಳಿಂದ ಅನುದಾನ ಬಿಡುಗಡೆಸ್ವೀಕೃತಿಯಾಗಿರುವ ಪ್ರಸ್ತಾವನೆಗಳು.
2. ಭಾರತ ಸರ್ಕಾರಕ್ಕೆ ಕಳುಹಿಸಿರುವ ತುರ್ತು ಕ್ರಿಯಾ ಯೋಜನೆ ಪ್ರಸ್ತಾಪ ದಿ:10.1.2011.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 128 ಗ್ರಾನೀಸ(4) 2008, ದಿ:25.11.2008.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 80 ಗ್ರಾನೀಸ(4) 2010, ದಿ:21.03.2011.

---

**ಪೀಠಿಕೆ:**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅಂತರ್ಜಲ ಆಧಾರಿತ ಕುಡಿಯುವ ನೀರು ಸರಬರಾಜು ಯೋಜನೆಗಳು ವಿಫಲವಾಗುತ್ತಿದ್ದು, ಬೇಸಿಗೆಯಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿರುವುದರಿಂದ, ತುರ್ತು ಕುಡಿಯುವ ನೀರು ಪೂರೈಕೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ / ವಿಶೇಷ ಅನುದಾನವನ್ನು ಮೇಲೆ(4)ರಲ್ಲಿ ಓದಲಾದ ಆದೇಶದಲ್ಲಿ ಈಗ ವಿಧಾನ ಸಭೆ ಚುನಾವಣೆ ನಡೆಯಲಿರುವ ಕೋಲಾರ, ದಾವಣಗೆರೆ ಮತ್ತು ರಾಮನಗರ ಜಿಲ್ಲೆಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಹಣ ಬಿಡುಗಡೆಯಾಗಿದೆ. ಆದರೆ, ಚುನಾವಣೆ ಘೋಷಣೆಯಾಗಿರುವ ಈ 3-ಜಿಲ್ಲೆಗಳಲ್ಲಿಯೂ ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವುದರಿಂದ, ಸಾರ್ವಜನಿಕ ಹಿತದೃಷ್ಟಿಯಿಂದ ಅನುದಾನ ಬಿಡುಗಡೆ ಮಾಡಲು ಚುನಾವಣಾ ಆಯೋಗದಿಂದ ಸಹಮತಿ ಪಡೆದು, ಆದೇಶ ಹೊರಡಿಸಲು ನಿರ್ಧರಿಸಲಾಗಿದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ /80/ ಗ್ರಾನೀಸ (4) 2010 ಬೆಂಗಳೂರು, ದಿನಾಂಕ:23.03.2011**

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಕೋಲಾರ, ದಾವಣಗೆರೆ ಮತ್ತು ರಾಮನಗರ ಜಿಲ್ಲಾ ಪಂಚಾಯತಿಗಳಿಗೆ ಸದರಿ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳಲ್ಲಿ ಸ್ಥಳೀಯ ಅಗತ್ಯತೆ ಆಧರಿಸಿ, ಚಾಲ್ತಿ ಮಾರ್ಗಸೂಚಿಗಳನ್ವಯ ಅಗತ್ಯವಿರುವ ತುರ್ತು ಕುಡಿಯುವ ನೀರು ಪೂರೈಕೆ ಯೋಜನಾ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕೆಳಕಂಡಂತೆ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳಿಗೆ ರಾಜ್ಯ ವಲಯದಡಿ ಒಟ್ಟು ರೂ.420.00ಲಕ್ಷ (ನಾಲ್ಕು ನೂರ ಇಪ್ಪತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನ ಬಿಡುಗಡೆ ಮಾಡಲಾಗಿದೆ.

| ಕ್ರ.ಸಂ | ಜಿಲ್ಲೆ | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಕೋಲಾರ | 240.00 |
| 2 | ದಾವಣಗೆರೆ | 120.00 |
| 3 | ರಾಮನಗರ | 60.00 |
| | ಒಟ್ಟು | **420.00** |

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಮೇಲೆ(4)ರಲ್ಲಿ ಓದಲಾದ ಆದೇಶದಲ್ಲಿನ ನಿಬಂಧನೆಗೊಳಪಟ್ಟು ಮಾತ್ರ ವಿನಿಯೋಗಿಸತಕ್ಕದ್ದು ಮತ್ತು ಅದರಂತೆ, ಅನುದಾನ ವಿನಿಯೋಗ ಹಾಗೂ ಲೆಕ್ಕ ಹೊಂದಾಣಿಕೆಯನ್ನು ಸದರಿ ಆದೇಶದ ಖಂಡಿಕೆ: 3 ಮತ್ತು 4ರನ್ವಯ ಮಾಡತಕ್ಕದ್ದು.

3. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನ ವಿನಿಯೋಗವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತೀವ್ರ ಕುಡಿಯುವ ನೀರಿನ ಸಮಸ್ಯೆಗೊಳಗಾಗಿರುವ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ ಜಿಲ್ಲಾಧಿಕಾರಿಗಳ ಸಮನ್ವಯ / ಸಹಮತಿಯೊಂದಿಗೆ ವಿನಿಯೋಗಿಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯದರ್ಶಿಗಳು

ಕ್ರಮವಹಿಸತಕ್ಕದ್ದು. ಎಲ್ಲಿ ಕೊಳವೆ ಬಾವಿ ವಿಫಲವಾಗಿದೆಯೋ ಅಂತಹ ಕಡೆಗಳಲ್ಲಿ ಮಾತ್ರ ಬದಲಿ ಕೊಳವೆ ಬಾವಿಗಳನ್ನು ಒದಗಿಸುವುದು / ಹಾಲಿಯಿರುವ ಯೋಜನೆಗಳ ದುರಸ್ತಿ, ಪೈಪ್ ಲೈನ್‌ಗಳ ದುರಸ್ತಿ, ಸಾಗಾಣಿಕೆ ಮುಖೇನ ನೀರು ಪೂರೈಕೆ ಮಾಡುವುದು, ಖಾಸಗಿ ಬೋರ್‌ವೆಲ್‌ಗಳ ಸೇವೆ ಪಡೆಯುವಂತಹ ಸಣ್ಣ ಪ್ರಮಾಣದ ಕಾಮಗಾರಿಗಳನ್ನು ಮಾತ್ರ ಅನುಷ್ಠಾನಗೊಳಿಸತಕ್ಕದ್ದು. ಈ ಪ್ರಕ್ರಿಯೆಯಲ್ಲಿ ಯಾವುದೇ ರಾಜಕೀಯ ಪಕ್ಷ / ಚುನಾಯಿತ ಜನ ಪ್ರತಿನಿಧಿಗಳನ್ನು ಆಹ್ವಾನಿಸುವುದು, ಪ್ರಚಾರ ನೀಡುವುದು ಇತ್ಯಾದಿಗಳನ್ನು ಚುನಾವಣಾ ನೀತಿ ಸಂಹಿತೆಗೆ ವಿರುದ್ಧವಾಗಿ ಮಾಡತಕ್ಕದ್ದಲ್ಲ. ಈ ಕುರಿತಂತೆ, ಚುನಾವಣಾ ಆಯೋಗದಿಂದ ಬಂದಿರುವ ಸೂಚನೆಯ ಉದ್ಧೃತ ಭಾಗವನ್ನು ಈ ಆದೇಶಕ್ಕೆ ಮುಂದಿನ ಅನುಪಾಲನೆಗಾಗಿ ಲಗತ್ತಿಸಿದೆ.

4. ಈ ಆದೇಶವನ್ನು ಚುನಾವಣಾ ಆಯೋಗದ ಸಹಮತಿ ಪತ್ರ ಸಂಖ್ಯೆ: ಸಿಆಸುಇ 05 ಚುಮಸಂ 2011, ದಿ:21.03.2011ರನ್ವಯ ಮತ್ತು ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: FD 149 Exp.6/2011, ದಿ: 8.03.2011ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
9. ವಿಶೇಷಾಧಿಕಾರಿ(ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು-1
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ, ಅಭಯ ಸಂಕೀರ್ಣ,4ನೇ ಮಹಡಿ,ನಂ.55, ರಿಸಲ್ದಾರ್ ರಸ್ತೆ, ಶೇಷಾದ್ರಿಪುರ , ಬೆಂಗಳೂರು-20.
12. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
13. ಜಿಲ್ಲಾಪಂಚಾಯತ್‌ಗಳ ಅಧ್ಯಕ್ಷರು, ಕೋಲಾರ, ದಾವಣಗೆರೆ ಮತ್ತು ರಾಮನಗರ.
14. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು ಕೋಲಾರ, ದಾವಣಗೆರೆ ಮತ್ತು ರಾಮನಗರ.
15. ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಕೋಲಾರ, ದಾವಣಗೆರೆ ಮತ್ತು ರಾಮನಗರ.
16. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರುಗಳು, ಬೆಂಗಳೂರು ಮತ್ತು ದಾವಣಗೆರೆ.
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್‌ಗಳು, ಕೋಲಾರ, ದಾವಣಗೆರೆ ಮತ್ತು ರಾಮನಗರ.
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED ಬೆಂಗಳೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂರಾ) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು, KRWSSA ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, / ಅಪರ ನಿರ್ದೇಶಕರು, ಆರ್ಥಿಕ – KRWSSA , RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ ಕರ್ನಾಟಕ ವಿಕಾಸ ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).